# ಜತ್ತಿ ಕನಸು ಸಿಎಂಆರ್ ಸಂಸ್ಥೆ ಈಡೇರಿಸಿದೆ

**ಬೆಂಗಳೂರು:** ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ 32ನೇ ಸಂಸ್ಥಾಪಕರ ದಿನಾಚರಣೆಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಚಾಲನೆ ನೀಡಿದರು.



ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆ ಆಯೋಜಿಸಿದ್ದ ಸಂಸ್ಥಾಪಕರ ದಿನಾಚರಣೆಯಲ್ಲಿ ವಿದ್ಯಾರ್ಥಿಗಳಿಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಪ್ರತಿಭಾ ಪುರಸ್ಕಾರ ನೀಡಿದರು. ಡಾ.ಕೆ.ಸಿ ರಾಮಮೂರ್ತಿ ಇದ್ದರು.

**ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣವನ್ನು ನೀಡಬೇಕೆಂಬ ಉದ್ದೇಶದಿಂದ ಸ್ಥಾಪನೆಯಾದ ಸಿಎಂಆರ್ ಶಿಕ್ಷಣ ಸಂಸ್ಥೆಗಳು ಪ್ರತಿವರ್ಷ ಸಂಸ್ಥಾಪಕರ ದಿನದ ಸ್ಮರಣಾರ್ಥ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಹಾಗೂ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸುವ ಅರ್ಥಪೂರ್ಣ ಕಾರ್ಯಕ್ರಮವನ್ನು ಕಳೆದ 32 ವರ್ಷಗಳಿಂದ ಮುನ್ನಡೆಸಿಕೊಂಡು ಬರುತ್ತಿರುವುದು.**

**-ಡಾ.ಕೆ.ಸಿ ರಾಮಮೂರ್ತಿ**
ಸಿಎಂಆರ್ ವಿಶ್ವವಿದ್ಯಾಲಯ ಅಧ್ಯಕ್ಷ

ನಂತರ ಮಾತನಾಡಿದ ಅವರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ವಿದ್ಯಾರ್ಜನೆ ಮಾಡುವುದು ಬಹಳ ಶ್ರೇಷ್ಠವಾದ ಕೆಲಸ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಶಿಕ್ಷಣವಂತರಾಗಬೇಕೆಂಬ ಮಹದಾಶದೊಂದಿಗೆ ಪ್ರಾಥಮಿಕ ಹಂತದಲ್ಲಿ ಆರಂಭವಾದ ಸಿಎಂಆರ್ ಶಿಕ್ಷಣ ಸಂಸ್ಥೆ ಇಂದು ವಿಶ್ವವಿದ್ಯಾಲಯ ಮಟ್ಟಕ್ಕೆ ಬೆಳೆದು ಶಿಕ್ಷಣ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡುತ್ತಿದೆ. ಸಮಾಜದ ಪ್ರತಿಯೊಬ್ಬರಿಗೂ ಶಿಕ್ಷಣ ದೊರಕಬೇಕೆಂಬುದು ಮಾಜಿ ಉಪರಾಷ್ಟ್ರಪತಿಗಳು ಹಾಗೂ ಮಾಜಿ ಮುಖ್ಯಮಂತ್ರಿಗಳಾಗಿದ್ದ ಬಿ.ಡಿ ಜತ್ತಿಯವರ ಕನಸಾಗಿತ್ತು. ಅದರಂತೆ ಅವರು ಶಿಕ್ಷಣ ನೀಡಲು ಖಾಸಗಿ ಶಾಲೆಗಳಿಗೂ ಅವಕಾಶ ಮಾಡಿಕೊಟ್ಟರು ಎಂದು ಶ್ಲಾಘಿಸಿದರು. ಸಂಸ್ಥಾಪಕರ ದಿನದ ಸ್ಮರಣಾರ್ಥ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಒಟ್ಟು 7 ಕೋಟಿ ಹಣವನ್ನು ಪ್ರತಿಭಾ ಪುರಸ್ಕಾರ ಹಾಗೂ ಶಿಷ್ಯ ವೇತನ ನೀಡಲಾಯಿತು.